All India Radio: Bangalore
National Bulletin In Kannada
22.05.2025  07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

********

ಮುಖ್ಯಾಂಶಗಳು

೧. ಕರ್ನಾಟಕದ ೫ ಸೇರಿದಂತೆ ದೇಶದ ೧೦೩ ಅಭಿವೃದ್ಧಿಪಡಿಸಿದ ರೈಲ್ವೆ ನಿಲ್ದಾಣಗಳನ್ನು ಇಂದು ಲೋಕಾರ್ಪಣೆ ಮಾಡಲಿರುವ ಪ್ರಧಾನಿ ನರೇಂದ್ರಮೋದಿ

೨. ನೈಋತ್ಯ ಮುಂಗಾರು  ಮುಂದಿನ ಮಾರ್ನಾಲ್ಕು ದಿನಗಳಲ್ಲಿ ಕೇರಳ ಪ್ರವೇಶಿಸುವ ಸಾಧ್ಯತೆ : ಕೇಂದ್ರ ಹವಮಾನ ಇಲಾಖೆ ಮುನ್ಸೂಚನೆ

೩. ಭಾರತದಲ್ಲಿ ಅಧಿಕೃತ ಸ್ಥಾನಮಾನಕ್ಕೆ ಹೊಂದಿಕೆಯಾಗದ ಚಟುವಟಿಕೆಗಳಲ್ಲಿ ತೊಡಗಿದ ಕಾರಣ  ಭಾರತ ತೊರೆಯುವಂತೆ ಪಾಕಿಸ್ತಾನಿ ರಾಯಭಾರಿ ಸಿಬ್ಬಂದಿಗೆ ಸೂಚನೆ

೪. ಐಪಿಎಲ್ ಕ್ರಿಕೆಟ್ : ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ ಗೆದ್ದು ಪ್ಲೇ ಆಫ್ ಗೆ ಲಗ್ಗೆ ಇಟ್ಟ ಮುಂಬೈ ಇಂಡಿಯನ್ಸ್

**************

ದೇಶಾದ್ಯಂತ ರೈಲು ನಿಲ್ದಾಣಗಳ ಅಭಿವೃದ್ಧಿ ತ್ವರಿತವಾಗಿ ಪೂರ್ಣಗೊಳ್ಳುತ್ತಿದೆ. ಸದ್ಯ ಕಾಮಗಾರಿ ಪೂರ್ಣಗೊಂಡ ಕರ್ನಾಟಕದ ೫ ರೈಲ್ವೆ ನಿಲ್ದಾಣಗಳು ಸೇರಿದಂತೆ ದೇಶದ ೧೦೩ ರೈಲ್ವೆ ನಿಲ್ದಾಣಗಳನ್ನು ಪ್ರಧಾನಿ ನರೇಂದ್ರ ಮೋದಿ ಇಂದು ವರ್ಚುವಲ್ ಮೂಲಕ ಲೋಕಾರ್ಪಣೆ ಮಾಡಲಿದ್ದಾರೆ. ೧೮ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ೮೬ ಜಿಲ್ಲೆಗಳಲ್ಲಿ ಈ ರೈಲ್ವೈ ನಿಲ್ದಾಣಗಳನ್ನು ಒಂದು ಸಾವಿರದ ನೂರು ಕೋಟಿ ರೂಪಾಯಿ ವೆಚ್ಚದಲ್ಲಿ ಅಭಿವೃದ್ಧಿ ಪಡಿಸಲಾಗಿದೆ. ರಾಜಸ್ಥಾನದ ಬಿಕೇನರ್ ನಲ್ಲಿ ನಡೆಯಲಿರುವ ಸಮಾರಂಭದಲ್ಲಿ ಅವರು ಅಭಿವೃದ್ಧಿಪಡಿಸಿದ ನೂತನ ರೈಲ್ವೈ ನಿಲ್ದಾಣಗಳನ್ನು ಲೋಕಾರ್ಪಣೆ ಮಾಡಲಿದ್ದಾರೆ.

ಇದೇ ಸಂದರ್ಭದಲ್ಲಿ ಅವರು ೨೬ ಸಾವಿರ ಕೋಟಿ ರೂಪಾಯಿ ಮೊತ್ತದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿದ್ದಾರೆ. ನೈರುತ್ಯ ರೈಲ್ವೆ ವಿಭಾಗದ ಧಾರವಾಡ, ಗದಗ, ಬಾಗಲಕೋಟೆ, ಗೋಕಾಕ ಮತ್ತು ಮುನಿರಾಬಾದ್ ಸೇರಿದಂತೆ ವಿವಿಧ ರೈಲ್ವೆ ನಿಲ್ದಾಣಗಳನ್ನು ಅಮೃತ ಭಾರತ ಸ್ಟೇಷನ್ ಯೋಜನೆಯಡಿ ಪುನಾರಾಭಿವೃದ್ಧಿಗೊಳಿಸಲಾಗಿದೆ.

ಸಮಯದ ಉಳಿತಾಯದ ಜೊತೆಗೆ ಪರಿಸರ ಸ್ನೇಹಿ ವಾತಾವರಣದ ಮೂಲಕ ಪ್ರಯಾಣಿಕರಿಗೆ ರೈಲು ನಿಲ್ದಾಣಗಳಲ್ಲಿ ಅತ್ಯಾಧುನಿಕ ಸೌಲಭ್ಯ ಲಭ್ಯವಾಗಲಿದೆ. ಪ್ರಯಾಣಿಕರ ಸುಗಮ ಸಂಚಾರಕ್ಕೆ ಅತ್ಯಾಧುನಿಕ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿದೆ. ಈ ಅಮೃತ ಭಾರತ ರೈಲ್ವೆ ಯೋಜನೆಯಡಿ ದೇಶವ್ಯಾಪಿ ರೈಲು ನಿಲ್ದಾಣಗಳನ್ನು ಉನ್ನತೀಕರಣಗೊಳಿಸಲಾಗುತ್ತಿದೆ. ಅಮೃತ ಭಾರತ ರೈಲ್ವೆ ಯೋಜನೆಯಡಿ ಬಾಗಲಕೋಟೆ ರೈಲ್ವೆ ನಿಲ್ದಾಣವನ್ನು ಸುಮಾರು ೧೬ ಕೋಟಿ ರೂಪಾಯಿಗಳ ವೆಚ್ಚದಲ್ಲಿ ಅತ್ಯಾಧುನಿಕವಾಗಿ ನವೀಕರಿಸಲಾಗಿದೆ. ರೈಲ್ವೆ ನಿಲ್ದಾಣದಲ್ಲಿ ಸುಸಜ್ಜಿತ ತಂಗುದಾಣ, ಶೌಚಾಲಯ ಹಾಗೂ ನೂತನ ಪ್ಲಾಟ್ ಫಾರ್ಮ್ ಮತ್ತು ಎಸ್ಕಲೇಟರ್ ನಿರ್ಮಾಣ ಸೇರಿದಂತೆ ಶುದ್ಧ ಕುಡಿಯುವ ನೀರು ವ್ಯವಸ್ಥೆ ಜೊತೆಗೆ ವಿವಿಧ ಸೌಲಭ್ಯ ಕಲ್ಪಿಸಲಾಗಿದೆ. ಬಾಗಲೋಕೋಟೆ ವಿದ್ಯಾರ್ಥಿ ಭೈರೇಗೌಡ ಮಾತನಾಡಿ, ಕೇಂದ್ರ ಸರ್ಕಾರ ರೈಲ್ವೆ ನಿಲ್ದಾಣಗಳನ್ನು ಪುನರಾಭಿವೃದ್ಧಿಗೊಳಿಸುವ ಮೂಲಕ ಜನರಿಗೆ ಹೆಚ್ಚಿನ ಅನುಕೂಲ ಕಲ್ಪಿಸುತ್ತಿದೆ, ನವೀಕರಣಗೊಂಡ ನಿಲ್ದಾಣ ಪ್ರಯಾಣಿಕ ಸ್ನೇಹಿಯಾಗಿರುವುದು ಸಂತಸದ ಸಂಗತಿ ಎಂದರು. ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಮಾಜಿ ಅಧ್ಯಕ್ಷ ಎ.ಎ ದಂಡಿಯಾ ಮಾತನಾಡಿ, ಬ್ರಿಟಿಷ್ ಕಾಲದಲ್ಲಿ ನಿರ್ಮಾಣಗೊಂಡ ನಿಲ್ದಾಣವನ್ನು ಕೇಂದ್ರ ಸರ್ಕಾರ ನವೀನ ಮಾದರಿಯಲ್ಲಿ ಅಭಿವೃದ್ಧಿಗೊಳಿಸಿರುವುದು ಹೆಮ್ಮೆಯ ಸಂಗತಿ ಎಂದು ಅಭಿಪ್ರಾಯಪಟ್ಟರು. ಮುಖ್ಯ ರೈಲ್ವೆ ವಾಣಿಜ್ಯ ನಿರೀಕ್ಷಕ ಚಂದ್ರಶೇಖರ್ ಮಾತನಾಡಿ, ಅಮೃತ ಭಾರತ ರೈಲ್ವೆ ಯೋಜನೆಯಡಿ ಹೈಟೆಕ್ ಮಾದರಿಯಲ್ಲಿ ನಿಲ್ದಾಣವನ್ನು ನವೀಕರಿಸಲಾಗಿದೆ, ಆಧುನಿಕ ಸೌಲಭ್ಯಗಳೊಂದಿಗೆ ಸೋಲಾರ್ ವಿದ್ಯುತ್ ಘಟಕಗಳನ್ನು ಸಹ ನಿರ್ಮಿಸಲಾಗಿದ್ದು, ಪ್ರಯಾಣಿಕರ ಅನುಕೂಲಕ್ಕಾಗಿ ಸ್ಥಳೀಯ ಉತ್ಪನ್ನಗಳ ಮಾರಾಟ ಮಳಿಗೆಗಳನ್ನು ಸಹ ನಿರ್ಮಿಸಿರುವುದು ವಿಶೇಷವಾಗಿದೆ ಎಂದು ಹೇಳಿದರು. ಹುಬ್ಬಳಿ-ಧಾರವಾಡ ರೈಲ್ವೆ ನಿಲ್ದಾಣವನ್ನು ಆಧುನಿಕ ಸೌಲಭ್ಯಗಳನ್ನು ಒಳಗೊಂಡಂತೆ ನವೀಕರಿಸಿ, ಸುಮಾರು ೧೭ ಕೋಟಿ ರೂಪಾಯಿಗಳ ವೆಚ್ಚದಲ್ಲಿ ಮೇಲ್ದರ್ಜೆರಿಸಲಾಗಿದೆ.

ನೈರುತ್ಯ ರೈಲ್ವೆ ವಿಭಾಗದ ಐದು ಪ್ರಮುಖ ರೈಲ್ವೆ ನಿಲ್ದಾಣಗಳನ್ನು ಅತ್ಯಾಧುನಿಕ ಮಾದರಿಯಲ್ಲಿ ಪುನಾರಾಭಿವೃದ್ಧಿಗೊಳಿಸಲಾಗಿದೆ. ರೈಲ್ವೆ ಹೋರಾಟ ಸಮಿತಿ ಅಧ್ಯಕ್ಷ ಗಣೇಶ ಸಿಂಗ ಬ್ಯಾಳಿ ಮಾತನಾಡಿ, ಹೈಟೆಕ್ ರೂಪದಲ್ಲಿ ರೈಲ್ವೆ ನಿಲ್ದಾಣವನ್ನು ನವೀಕರಿಸಲಾಗಿರುವುದು ಸಂತಸದ ಸಂಗತಿಯಾಗಿದ್ದು, ಶುದ್ಧ ಕುಡಿಯುವ ನೀರು, ಸುಸಜ್ಜಿತ ತಂಗುದಾಣದೊಂದಿಗೆ, ಎಕ್ಸಲೇಟರ್ ವ್ಯವಸ್ಥೆಯನ್ನು ನಿರ್ಮಿಸಲಾಗಿದ್ದು ಅತ್ಯಾಧುನಿಕ ಸೌಲಭ್ಯಗಳನ್ನು ಕಲ್ಪಿಸಲಾಗಿದೆ ಎಂದು ಹೇಳಿದರು.

**************

ದೇಶದಲ್ಲಿ ಒಂದು ಸಾವಿರದ ಮುನ್ನೂರು ರೈಲ್ವೆ ನಿಲ್ದಾಣಗಳನ್ನು ಪುನಶ್ಚೇತನಗೊಳಿಸಲು ನಿರ್ಧರಿಸಲಾಗಿದೆ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ರಾಜಸ್ಥಾನದ ಬಿಕೇನರ್ ನಲ್ಲಿ ಮಾತಾನಾಡಿದ ಅವರು, ಅಮೃತ್ ಭಾರತ್ ಸ್ಟೇಷನ್ ಯೋಜನೆಯಡಿ ಇಂದು ನೂರ ಮೂರು ರೈಲು ನಿಲ್ದಾಣಗಳನ್ನ ಪ್ರದಾನಿ ನರೇಂದ್ರಮೋದಿ ಲೋಕಾರ್ಪಣೆ ಗೊಳಿಸುತ್ತಿದ್ದು, ಉಳಿದ ನಿಲ್ದಾಣಗಳನ್ನು ಭಾರತದ ಸಾಂಸ್ಕೃತಿಕ ಪರಂಪರೆ ಹಾಗೂ ವಾಸ್ತುಶಿಲ್ಪಕ್ಕೆ ಅನುಗುಣವಾಗಿ ಅಭಿವೃದ್ಧಿ ಮಾಡಲು ವ್ಯಾಪಕ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಹೇಳಿದರು.

ಧ್ವನಿ : ಅಶ್ವಿನಿ ವೈಷ್ಣವ್

**************

ಪ್ರಸಕ್ತ ವರ್ಷ ನೈಋತ್ಯ ಮುಂಗಾರು ದೇಶಕ್ಕೆ ವಾಡಿಕೆಗಿಂತ ತುಸು ಬೇಗನೆ ಆಗಮಿಸಲಿದ್ದು, ಮುಂದಿನ ಮೂರ್ನಾಲ್ಕು ದಿನಗಳಲ್ಲಿ ಕೇರಳ ಪ್ರವೇಶಿಸುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.ಪ್ರತಿವರ್ಷ ವಾಡಿಕೆಯಂತೆ ಜೂನ್ ೧ ರಂದು ಮುಂಗಾರು ಪ್ರವೇಶಿಸಲಿದ್ದು, ಈ ಬಾರಿ ಐದು ದಿನ ಮುನ್ನವೇ ಕೇರಳಕ್ಕೆ ಆಗಮಿಸಲಿದೆ. ಬಳಿಕ ಬಂಗಾಳ ಮತ್ತು ಈಶಾನ್ಯ ರಾಜ್ಯಗಳತ್ತ ವ್ಯಾಪಿಸಲಿದೆ ಎಂದು ಇಲಾಖೆ ತಿಳಿಸಿದೆ.ಈ ಮಧ್ಯೆ, ಕರ್ನಾಟಕದ

ಕರಾವಳಿ ಭಾಗ, ಮಹಾರಾಷ್ಟ್ರ, ಕೇರಳ , ಗೋವಾ ಸೇರಿದಂತೆ ಹಲವೆಡೆ ಭಾರಿ ಮಳೆ, ಮುಂದಿನ ಐದಾರು ದಿನಗಳ ಕಾಲ ಮುಂದುವರಿಯಲಿದೆ. ಈ ತಿಂಗಳ ೨೩ರವರೆಗೆ ಪಂಜಾಬ್, ಹರಿಯಾಣ, ರಾಜಸ್ತಾನದ ಪೂರ್ವಭಾಗ ಸೇರಿದಂತೆ ಹಲವೆಡೆ ಬಿಸಿಗಾಳಿ ಬೀಸುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

**************

ನವದೆಹಲಿಯ ಪಾಕಿಸ್ತಾನ ರಾಯಭಾರ ಕಚೇರಿಯಲ್ಲಿ ಕೆಲಸ ಮಾಡುತ್ತಿರುವ ಪಾಕಿಸ್ತಾನಿ ಅಧಿಕಾರಿಯೊಬ್ಬರು ಭಾರತದಲ್ಲಿ ತಮ್ಮ ಅಧಿಕೃತ ಸ್ಥಾನಮಾನಕ್ಕೆ ಹೊಂದಿಕೆಯಾಗದ ಚಟುವಟಿಕೆಗಳಲ್ಲಿ ತೊಡಗಿದ್ದಕ್ಕಾಗಿ ೨೪ ಗಂಟೆಗಳ ಒಳಗೆ ಭಾರತ ತೊರೆಯುವಂತೆ ಸೂಚಿಸಿದೆ. ಭಾರತದಲ್ಲಿರುವ ಯಾವುದೇ ಪಾಕಿಸ್ತಾನಿ ರಾಜತಾಂತ್ರಿಕರು ಅಥವಾ ಅಧಿಕಾರಿಗಳು ತಮ್ಮ ಸವಲತ್ತುಗಳು ಮತ್ತು ಸ್ಥಾನಮಾನವನ್ನು ಯಾವುದೇ ರೀತಿಯಲ್ಲಿ ದುರುಪಯೋಗಪಡಿಸಿಕೊಳ್ಳದಂತೆ ಕಟ್ಟುನಿಟ್ಟಾಗಿ ಖಚಿತಪಡಿಸಿಕೊಳ್ಳುವಂತೆ ಪಾಕಿಸ್ತಾನಕ್ಕೆ ಸೂಚಿಸಲಾಗಿದೆ.

**************

ಡೆನ್ಮಾರ್ಕ್ ಪ್ರವಾಸದಲ್ಲಿರುವ ವಿದೇಶಾಂಗ ಸಚಿವ ಡಾ.ಎಸ್. ಜೈಶಂಕರ್ ಅವರನ್ನು ಅಲ್ಲಿನ ಪ್ರಧಾನಿ ಮೆಟೆ ಫೆಡರಿಕ್ ಸೇನ್ ಅವರು ಕೋಪನ್ ಹೇಗನ್ ನಲ್ಲಿ ನಿನ್ನೆ ಬರಮಾಡಿಕೊಂಡರು.ಬಳಿಕ, ಭಾರತ - ಡೆನ್ಮಾರ್ಕ್ ನಡುವೆ ಹಸಿರು ಇಂಧನ ಕಾರ್ಯತಂತ್ರ ಪಾಲುದಾರಿಕೆ ಕುರಿತು ದ್ವಿಪಕ್ಷೀಯ ಮಾತುಕತೆ ನಡೆಯಿತು. ಭಯೋತ್ಪಾದನೆ ವಿರುದ್ಧದ ಹೋರಾಟದಲ್ಲಿ ಅಗತ್ಯ ಬೆಂಬಲ ನೀಡುವುದಾಗಿ ಡೆನ್ಮಾರ್ಕ್ ಪುನರುಚ್ಚರಿಸಿದ್ದು, ಸಚಿವ ಜೈಶಂಕರ್ ಅಲ್ಲಿನ ಪ್ರಧಾನಿಗೆ ಕೃತಜ್ಞತೆ ಸಲ್ಲಿಸಿದ್ದಾರೆ.

**************

ಪಶ್ಚಿಮ ಬಂಗಾಳದ ಮುರ್ಷಿದಾಬಾದ್ ನಲ್ಲಿ ಇತ್ತೀಚೆಗೆ ಹಿಂದೂ ಸಮುದಾಯಗಳನ್ನು ಗುರಿಯಾಗಿಸಿ ನಡೆದ ಹಿಂಸಾಚಾರದಲ್ಲಿ ಆಡಳಿತಾರೂಢ ಟಿಎಂಸಿ ಪಕ್ಷದ ಪ್ರಚೋದನೆ ಇರುವುದು ಸಾಬೀತಾಗಿದೆ ಎಂದು ಬಿಜೆಪಿ ಆರೋಪಿಸಿದೆ.ನವದೆಹಲಿಯಲ್ಲಿ ಬಿಜೆಪಿ ವಕ್ತಾರ ಸುಧಾಂಶು ತ್ರಿವೇದಿ ಮಾತನಾಡಿ, ವಕ್ಫ್ ತಿದ್ದುಪಡಿ ಕಾನೂನು ಜಾರಿ ನಂತರ ಪಶ್ಚಿಮ ಬಂಗಾಳದಲ್ಲಿ ನಡೆದ ಹಿಂಸಾಚಾರದಲ್ಲಿ ಅಲ್ಲಿನ ಆಡಳಿತ ಪಕ್ಷ ಟಿಎಂಸಿ ನಾಯಕರು ಭಾಗಿಯಾಗಿರುವುದು, ನ್ಯಾಯಾಲಯದ ಮೇಲ್ವಿಚಾರಣೆಯಲ್ಲಿ ನಡೆದ ತನಿಖಾ ಸಮಿತಿ ವರದಿಗಳಿಂದ ಬಹಿರಂಗಗೊಂಡಿದೆ ಎಂದರು.ಟಿಎಂಸಿ ನಾಯಕರ ನಿರ್ದೇಶನದ ಮೇರೆಗೆ ಹಿಂದೂ ಸಮುದಾಯ ಮತ್ತು ಕುಟುಂಬಗಳನ್ನು ಗುರಿಯಾಗಿಸಿ ಬರ್ಬರ ಹಿಂಸಾಕೃತ್ಯ ನಡೆಸಲಾಗಿದೆ. ಈ ಬಗ್ಗೆ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಉತ್ತರಿಸಬೇಕು ಎಂದು ಸುಧಾಂಶು ತ್ರಿವೇದಿ ಆಗ್ರಹಿಸಿದರು.

**************

ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಐಪಿಎಲ್ ಟಿ೨೦ ಕ್ರಿಕೆಟ್‌ನಲ್ಲಿ, ಮುಂಬೈ ಇಂಡಿಯನ್ಸ್ ಡೆಲ್ಲಿ ಕ್ಯಾಪಿಟಲ್ಸ್ ತಂಡವನ್ನು ೫೯ ರನ್‌ಗಳಿಂದ ಸೋಲಿಸಿ ಪ್ಲೇಆಫ್‌ಗೆ ಪ್ರವೇಶಿಸಿತು. ಈ ಮೂಲಕ ಮುಂದಿನ ಹಂತಕ್ಕೆ ಪ್ರವೇಶ ಪಡೆದ ನಾಲ್ಕನೇ ಮತ್ತು ಅಂತಿಮ ತಂಡವಾಗಿ ಹೊರ ಹೊಮ್ಮಿತು.ಇದರೊಂದಿಗೆ, ಐಪಿಎಲ್ ೨೦೨೫ ರಲ್ಲಿ ಡೆಲ್ಲಿ ಕ್ಯಾಪಿಟಲ್ಸ್‌ನ ಪ್ರಯಾಣ ಕೊನೆಗೊಂಡಿತು. ಮೊದಲು ಬ್ಯಾಟಿಂಗ್ ಮಾಡಿದ ಆತಿಥೇಯ ಮುಂಬೈ ನಿಗದಿತ ೨೦ ಓವರ್‌ಗಳಲ್ಲಿ ೫ ವಿಕೆಟ್‌ಗಳಿಗೆ ೧೮೦ ರನ್ ಗಳಿಸಿತು. ಸೂರ್ಯಕುಮಾರ್ ಯಾದವ್ ೪೩ ಎಸೆತಗಳಲ್ಲಿ ೭೩ ರನ್ ಗಳಿಸಿ ಅಜೇಯರಾಗಿ ಉಳಿದರು. ಡೆಲ್ಲಿ ಪರ ಮುಖೇಶ್ ಕುಮಾರ್ ೨ ವಿಕೆಟ್‌ಗಳನ್ನು ಪಡೆದರು. ಇದಕ್ಕೆ ಪ್ರತಿಯಾಗಿ, ಡೆಲ್ಲಿ ತಂಡದ ಬ್ಯಾಟಿಂಗ್ ಲೈನ್ ಮುಂಬೈ ಬೌಲಿಂಗ್ ದಾಳಿಯ ಮುಂದೆ ಕುಸಿಯಿತು. ಪ್ರವಾಸಿ ತಂಡವು ೧೮.೨ ಓವರ್‌ಗಳಲ್ಲಿ ಕೇವಲ ೧೨೧ ರನ್‌ಗಳಿಗೆ ಆಲೌಟ್ ಆಯಿತು. ಸಮೀರ್ ರಿಜ್ವಿ ಅತ್ಯಧಿಕ ೩೯ ರನ್ ಗಳಿಸಿದರು.

ಮುಂಬೈ ಪರ ಮಿಚೆಲ್ ಸ್ಯಾಂಟ್ನರ್ ಮತ್ತು ಜಸ್ಪ್ರೀತ್ ಬುಮ್ರಾ ತಲಾ ೩ ವಿಕೆಟ್‌ಗಳನ್ನು ಪಡೆದರು. ಸೂರ್ಯಕುಮಾರ್ ಯಾದವ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.ಇಂದು ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಆತಿಥೇಯ ಗುಜರಾತ್ ಟೈಟಾನ್ಸ್ - ಲಕ್ನೋ ಸೂಪರ್ ಜೈಂಟ್ಸ್ ಮುಖಾಮುಖಿಯಾಗಲಿವೆ. ಪಂದ್ಯ ಈ ರಾತ್ರಿ ೦೭:೩೦ ಕ್ಕೆ ಆರಂಭವಾಗಲಿದೆ.

**************

ನಿನ್ನೆ ಜರ್ಮನಿಯ ಸುಹ್ಲ್‌ನಲ್ಲಿ ನಡೆದ ISSಈ ಜೂನಿಯರ್ ವಿಶ್ವಕಪ್ ಶೂಟಿಂಗ್‌ನಲ್ಲಿ ೫೦ ಮೀಟರ್ ರೈಫಲ್ ನಲ್ಲಿ ಆಡ್ರಿಯನ್ ಕರ್ಮಾಕರ್ ಬೆಳ್ಳಿ ಪದಕ ಗೆದ್ದಿದ್ದಾರೆ. ಈ ಮೂಲಕ  ಭಾರತ ತನ್ನ ಪದಕ ಖಾತೆಯನ್ನು ತೆರೆಯಿತು.೨೦ ವರ್ಷದ ಆಡ್ರಿಯನ್ ಕರ್ಮಾಕರ್ ೬೨೬.೭ ಅಂಕಗಳನ್ನು ಗಳಿಸಿದ್ದು, ಚಿನ್ನ ಗೆದ್ದ ಸ್ವೀಡನ್‌ನ ಜೆಸ್ಪರ್ ಜೋಹಾನ್ಸನ್‌ಗಿಂತ ಕೇವಲ ೦.೩ ಅಂಕಗಳ ಹಿಂದಿದ್ದಾನರೆ. ಈ ಹಿಂದೆ ವಿಶ್ವ ಚಾಂಪಿಯನ್‌ಶಿಪ್‌ನಲ್ಲಿ ಭಾರತದ ಕಿರಿಯ ಆಟಗಾರರುಸ್ಪರ್ಧಿಸಿದ್ದರು. ಆದರೆ ವಿಶ್ವಕಪ್‌ನಲ್ಲಿ ಎಂದಿಗೂ ಭಾಗವಹಿಸದ ಆಡ್ರಿಯನ್ ಆತ್ಮವಿಶ್ವಾಸದಿಂದ ಪ್ರದರ್ಶನ ನೀಡಿದರು. ಆಡ್ರಿಯನ್ ಜೂನಿಯರ್ ವಿಭಾಗದ ಸ್ಪರ್ಧೆಯಲ್ಲಿ ಹೊಸ ರಾಷ್ಟ್ರೀಯ ದಾಖಲೆಯನ್ನು ನಿರ್ಮಿಸಿದ್ದಾರೆ.ಜೂನಿಯರ್ ವಿಶ್ವಕಪ್‌ನಲ್ಲಿ ಶೂಟರ್ ಕನಕ್ ಭಾರತಕ್ಕೆ ಮೊದಲ ಚಿನ್ನದ ಪದಕವನ್ನು ತಂದುಕೊಟ್ಟಿದ್ದಾರೆ.ಕಳೆದ ವರ್ಷ ಲಿಮಾದಲ್ಲಿ ನಡೆದ ಜೂನಿಯರ್ ವಿಶ್ವ ಚಾಂಪಿಯನ್‌ಶಿಪ್‌ನಲ್ಲಿ ಬೆಳ್ಳಿ ಪದಕ ವಿಜೇತೆ ಕನಕ್, ಮಹಿಳೆಯರ ೧೦ ಮೀಟರ್ ಏರ್ ಪಿಸ್ತೂಲ್ ಫೈನಲ್‌ನಲ್ಲಿ ೨೩೯ ಅಂಕಗಳನ್ನು ಗಳಿಸಿ ಸ್ವರ್ಣ ಪದಕ ಗೆದ್ದಿದ್ದರು.

**************

ಐರ್ಲೆಂಡ್ ನ ದುಬ್ಲಿನ್ ನಲ್ಲಿ ನಡೆಯುತ್ತಿರುವ ಐರಿಶ್ ಓಪನ್ ಸ್ಕ್ವಾಷ್ ನಲ್ಲಿ ಭಾರತದ ಆಕಾಂಕ್ಷ ಸುಲುಂಖೆ ಕ್ವಾರ್ಟರ್ ಫೈನಲ್ಸ್ ಗೆ ಲಗ್ಗೆ ಇಟ್ಟಿದ್ದಾರೆ.ಇಂದು ರಾತ್ರಿ ನಡೆಯಲಿರುವ ಪಂದ್ಯದಲ್ಲಿ ಅವರು ನಾರ್ವೆಯ ಮದೆಲೈನಿ ಹೈಲ್ಯಾಂಡ್ ಅವರನ್ನು ಎದುರಿಸಲಿದ್ದಾರೆ.ನಿನ್ನೆ ನಡೆದ ಪ್ರೀ ಕ್ವಾರ್ಟರ್ ಫೈನಲ್ಸ್ ನಲ್ಲಿ ಆಕಾಂಕ್ಷ ಫ್ರಾನ್ಸ್ ನ  ಎಂಟನೇ ಶ್ರೇಯಾಂಕಿತ ಎನೋರಾ ವಿಲ್ಲರ್ಡ್ ವಿರುದ್ಧ ೧೧-೯, ೧೧-೯, ೧೧-೯ ರ ಅಂತರದಲ್ಲಿ ಗೆಲುವು ಸಾಧಿಸಿದರು.